**All India Radio: Bangalore**
**National Bulletin In Kannada**
**05.07.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.07.2026 1.10 p.m.**

**<><><><>**

ಮುಖ್ಯಾಂಶಗಳು

1. ನಾಳೆಯಿಂದ ಮೂರು ದಿನಗಳ ಇಂಡೋನೇಷ್ಯಾ ಪ್ರವಾಸ ಕೈಗೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ; ಜಕಾರ್ತಾದಲ್ಲಿ ಭಾರತೀಯ ಸಮುದಾಯ ಉದ್ದೇಶಿಸಿ ಭಾಷಣ
2. ಕರ್ನಾಟಕದಲ್ಲಿ ಎಸ್ಐಆರ್ ನಿಯಮ ಉಲ್ಲಂಘನೆ; ಚುನಾವಣಾ ಆಯೋಗಕ್ಕೆ ದೂರು - ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಎಚ್.ಡಿ.ಕುಮಾರಸ್ವಾಮಿ
3. ವಿಕಸಿತ ಭಾರತದ ಕನಸನ್ನು ಸಾಕಾರಗೊಳಿಸಲು ವಿಬಿ-ಜಿ ರಾಮ್ ಜಿ ಕಾಯ್ದೆ ಸಹಕಾರಿ- ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್
4. ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್: ಫೈನಲ್‌ನಲ್ಲಿ ಇಂದು ಇಂಗ್ಲೆಂಡ್ - ಆಸ್ಟ್ರೇಲಿಯಾ ಹಣಾಹಣಿ

<><><><>

ಇಂಡೋನೇಷ್ಯಾ ಗಣರಾಜ್ಯದ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ನಾಳೆಯಿಂದ ಇದೇ ೮ರವರೆಗೆ ಇಂಡೋನೇಷ್ಯಾ ಪ್ರವಾಸ ಕೈಗೊಳ್ಳಲಿದ್ದಾರೆ. ಇದು ಪ್ರಧಾನಿಯವರ ನಾಲ್ಕನೇ ಇಂಡೋನೇಷ್ಯಾ ಭೇಟಿಯಾಗಿದ್ದು, ೨೦೧೮ರ ಮೇ ತಿಂಗಳಲ್ಲಿ ಭಾರತ-ಇಂಡೋನೇಷ್ಯಾ ಸಂಬಂಧಗಳನ್ನು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗೆ ಮೇಲ್ದರ್ಜೆಗೇರಿಸಿದ ಬಳಿಕ ಮೊದಲ ದ್ವಿಪಕ್ಷೀಯ ಭೇಟಿ ಇದಾಗಿದೆ. ಪ್ರವಾಸದ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು, ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದು, ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಡಿ ವಿವಿಧ ಕ್ಷೇತ್ರಗಳ ಸಹಕಾರದ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ. ಜಕಾರ್ತಾದಲ್ಲಿ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಭಾಷಣ ಮಾಡಲಿರುವ ಪ್ರಧಾನಿ, ಉಭಯ ದೇಶಗಳ ನಡುವಿನ ಸಾಂಸ್ಕೃತಿಕ ಹಾಗೂ ಐತಿಹಾಸಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆಯಿದೆ. ಪ್ರಧಾನಿ ಮೋದಿ ಅವರ

ಭೇಟಿಯನ್ನು ಇಂಡೋನೇಷ್ಯಾದಲ್ಲಿರುವ ಭಾರತೀಯ ಸಮುದಾಯ ಕಾತುರದಿಂದ ನಿರೀಕ್ಷಿಸುತ್ತಿದೆ. ಜಕಾರ್ತಾದ ಇಂಡಿಯಾ ಕ್ಲಬ್ ಅಧ್ಯಕ್ಷ ಸಿದ್ಧಾರ್ಥ್ ತಪಾಡಿಯಾ, ಭಾರತ ಮತ್ತು ಇಂಡೋನೇಷ್ಯಾ ನಡುವಿನ ಸ್ನೇಹ ಸಂಬಂಧ ಅತ್ಯಂತ ಗಟ್ಟಿಯಾಗಿದೆ ಎಂದು ಹೇಳಿದ್ದಾರೆ. ಜಗತ್ತಿನ ವೇಗವಾಗಿ ಬೆಳೆಯುತ್ತಿರುವ ಎರಡು ಪ್ರಮುಖ ಆರ್ಥಿಕತೆಗಳಾದ ಭಾರತ ಮತ್ತು ಇಂಡೋನೇಷ್ಯಾ ಮೂಲಸೌಕರ್ಯ, ವ್ಯಾಪಾರ, ರಕ್ಷಣೆ, ಕೃಷಿ, ನೈಸರ್ಗಿಕ ಸಂಪನ್ಮೂಲ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸಹಕಾರವನ್ನು ಇನ್ನಷ್ಟು ವಿಸ್ತರಿಸಲಿವೆ ಎಂಬ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದ್ದಾರೆ. ಭಾರತೀಯ ಸಮುದಾಯ ಕಾರ್ಯಕ್ರಮದ ಯಶಸ್ವಿ ಆಯೋಜನೆಗಾಗಿ ೨೦೦ಕ್ಕೂ ಹೆಚ್ಚು ಸ್ವಯಂಸೇವಕರು ಸಿದ್ಧತೆಯಲ್ಲಿ ತೊಡಗಿಸಿಕೊಂಡಿದ್ದು, ಜಕಾರ್ತಾ ಮಾತ್ರವಲ್ಲದೆ ಬಾಲಿ, ಮೆಡಾನ್, ಸೆಮರಾಂಗ್ ಹಾಗೂ ಸುರಬಯಾದಿಂದಲೂ ಭಾರತೀಯರು ಭಾಗವಹಿಸುವ ನಿರೀಕ್ಷೆಯಿದೆ.

<><><>

ಭಾರತ ಪ್ರಮುಖ ಆರ್ಥಿಕ ಪಾಲುದಾರ ರಾಷ್ಟ್ರ ಎಂದು ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಇದೇ ತಿಂಗಳ ೮ ರಿಂದ ೧೦ ರವರೆಗೆ ಪ್ರಧಾನಿ ನರೇಂದ್ರ ಮೋದಿ ಅವರ ಆಸ್ಟ್ರೇಲಿಯಾ ಭೇಟಿಗೆ ಮುನ್ನ ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಈ ಹೇಳಿಕೆ ನೀಡಿದ್ದು, ವಿಶ್ವದ ನಾಲ್ಕನೇ ಅತಿದೊಡ್ಡ ಮತ್ತು ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿರುವ ಭಾರತವು ಆಸ್ಟ್ರೇಲಿಯಾಕ್ಕೆ ನಿರ್ಣಾಯಕ ಆರ್ಥಿಕ ಪಾಲುದಾರ ಎಂದು ಅಭಿಪ್ರಾಯಪಟ್ಟಿದ್ದಾರೆ. ಭಾರತ ಹಾಗೂ ಆಸ್ಟ್ರೇಲಿಯಾದ ಸಂಬಂಧವು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಿಂದ, ಆಳವಾದ ಆರ್ಥಿಕ ಹಾಗೂ ಸಾಂಸ್ಕೃತಿಕ ಸಂಪರ್ಕಗಳಿಂದ ಬೆಂಬಲಿತವಾಗಿದೆ. ವ್ಯಾಪಾರ, ರಕ್ಷಣೆ, ಭದ್ರತೆ ಮತ್ತು ತಂತ್ರಜ್ಞಾನದ ಕುರಿತಾದ ನಮ್ಮ ಸಹಕಾರವು ಉಭಯ ದೇಶಗಳಿಗೆ ಪ್ರಯೋಜನಗಳನ್ನು ನೀಡುತ್ತಿದೆ ಎಂದು ಅವರು ಹೇಳಿದ್ದಾರೆ.

<><><>

ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಸಮರ್ಕವಾಗಿ ನಡೆಯುತ್ತಿಲ್ಲ ಎಂದು ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಆಯೋಗದ ಉದ್ದೇಶಗಳನ್ನು ಬದಿಗೊತ್ತಿ, ಸಾಮೂಹಿಕವಾಗಿ - ಎನ್ಯೂಮರೇಷನ್ ಅರ್ಜಿಗಳನ್ನು ವಿತರಿಸಲಾಗುತ್ತಿದೆ. ಈ ಸಂಬಂಧ ಶೀಘ್ರದಲ್ಲೇ ಕೇಂದ್ರ ಸಚಿವರು ಹಾಗೂ ಬಿಜೆಪಿಯ ಪ್ರಮುಖರು, ರಾಜ್ಯ ಮುಖ್ಯ

ಚುನಾವಣಾಧಿಕಾರಿಯವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಿದ್ದೇವೆ ಎಂದರು. ಮತಗಟ್ಟೆ ಅಧಿಕಾರಿಗಳು ಮನೆ-ಮನೆಗೆ ತೆರಳಿ ಅರ್ಜಿ ಭರ್ತಿ ಮಾಡಿಸಿಕೊಳ್ಳಿ. ನಿಗಿದಿತ ಸಮಯದೊಳಗೆ ಪ್ರಕ್ರಿಯೆ ಪೂರ್ಣಗೊಳ್ಳದಿದ್ದರೆ ವಿಸ್ತರಣೆಯೂ ಆಗಬಹುದು. ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳಿ ಎಂದು ತಿಳಿಸಿದರು.

<><><><>

ಕರ್ನಾಟಕದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ವ್ಯಾಪಕ ನಿಯಮಾವಳಿ ಉಲ್ಲಂಘನೆಯಾಗುತ್ತಿದ್ದು, ಕಾಂಗ್ರೆಸ್ ಸರ್ಕಾರ, ನಕಲಿ ಮತದಾರರನ್ನು ಸೃಷ್ಟಿಸಲು ಮುಂದಾಗಿದೆ ಎಂದು ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಬಿಡದಿಯ ಕೇತಗಾನಹಳ್ಳಿಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು, ಎಸ್‌ಐಆರ್ ವಿಷಯದಲ್ಲಿ ವಿರೋಧ ಪಕ್ಷಗಳು ದೇಶಾದ್ಯಂತ ಜನರಲ್ಲಿ ಅನಗತ್ಯ ಗೊಂದಲ ಸೃಷ್ಟಿಸುವ ಕೆಲಸ ಮಾಡುತ್ತಿವೆ. ರಾಜ್ಯದಲ್ಲಿ ಪ್ರಕ್ರಿಯೆಯ ನಿಯಮಗಳನ್ನು ಗಾಳಿಗೆ ತೂರಲಾಗಿದೆ. ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬೇಕಾದ ಅಧಿಕಾರಿಗಳು ಕಲ್ಯಾಣ ಮಂಟಪದಂತಹ ಸ್ಥಳಗಳಲ್ಲಿ ಜನರನ್ನು ಒಂದೆಡೆ ಸೇರಿಸಿ ಪ್ರಕ್ರಿಯೆ ನಡೆಸುತ್ತಿರುವುದು ಸಂಶಯಾಸ್ಪದವಾಗಿದೆ. ಜಿಲ್ಲಾಧಿಕಾರಿಗಳ ಕಾರ್ಯ ವೈಫಲ್ಯದಿಂದ ಇಂತಹ ಲೋಪಗಳು ಸಂಭವಿಸುತ್ತಿದ್ದು, ಪಾರದರ್ಶಕತೆ ಕಾಯ್ದುಕೊಳ್ಳುವುದು ಅವಶ್ಯಕವಾಗಿದೆ. ಈ ಕುರಿತು ಕೇಂದ್ರ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಲಾಗುವುದು ಎಂದು ಸಚಿವರು ತಿಳಿಸಿದರು.

<><><><>

ಈ ತಿಂಗಳ ೧ರಿಂದ ವಿಕಸಿತ ಭಾರತ್ ಉದ್ಯೋಗ ಮತ್ತು ಜೀವನೋಪಾಯ ಖಾತರಿ ಮಿಷನ್ - 'ವಿಬಿ-ಜಿ ರಾಮ್ ಜಿ ಕಾಯ್ದೆ- ೨೦೨೫' ಯಶಸ್ವಿಯಾಗಿ ಜಾರಿಗೆ ಬಂದಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಇಂದು ಅವರು ವರ್ಚುವಲ್ ಮೂಲಕ ಈ ಮಿಷನ್ ಅಡಿಯಲ್ಲಿ ರಾಜ್ಯಗಳಿಗೆ ೨೫ ಸಾವಿರ ಕೋಟಿ ರೂಪಾಯಿ ನೆರವನ್ನು ಬಿಡುಗಡೆ ಮಾಡಿ ಮಾತನಾಡಿದರು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಿಂದ 'ವಿಬಿ-ಜಿ ರಾಮ್ ಜಿ ಕಾಯ್ದೆಗೆ' ಯಶಸ್ವಿಯಾಗಿ ಪರಿವರ್ತನೆಗೊಂಡಿದೆ. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ದೇಶಾದ್ಯಂತ

ಜಾರಿಗೊಳಿಸಲು ಮೂರು ವರ್ಷಗಳಿಗಿಂತ ಹೆಚ್ಚು ಸಮಯ ತೆಗೆದುಕೊಂಡಿದ್ದರೆ, ವಿಬಿ-ಜಿ ರಾಮ್ ಗ್ಯಾರಂಟಿ ಕಾಯ್ದೆಯನ್ನು ಕೇವಲ ಒಂದೇ ದಿನದಲ್ಲಿ ದೇಶಾದ್ಯಂತ ಜಾರಿಗೊಳಿಸಲಾಗಿದೆ ಎಂದು ತಿಳಿಸಿದರು. ಮುಂದಿನ ಐದು ವರ್ಷಗಳಲ್ಲಿ ೨.೮೬ ಲಕ್ಷ ಗ್ರಾಮ ಪಂಚಾಯಿತಿಗಳಲ್ಲಿ ೭.೫ ಲಕ್ಷ ಕೋಟಿ ರೂಪಾಯಿಗೂ ಅಧಿಕ ಹೂಡಿಕೆ ಮಾಡುವ ಮೂಲಕ ವಿಕಸಿತ ಭಾರತದ ಕನಸನ್ನು ಸಾಕಾರಗೊಳಿಸಲು ಈ ಕಾಯ್ದೆ ನೆರವಾಗಲಿದೆ ಎಂದು ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

<><><><>

ಛತ್ತೀಸ್‌ಗಢದ ಖ್ಯಾತ ಜಾನಪದ ಗಾಯಕಿ ಹಾಗೂ ಪದ್ಮ ವಿಭೂಷಣ ಪ್ರಶಸ್ತಿ ಪುರಸ್ಕೃತೆ ತೀಜನ್ ಬಾಯಿ ಅವರು ಇಂದು ಮುಂಜಾನೆ ನಿಧನರಾದರು. ಅವರಿಗೆ ೭೦ ವರ್ಷ ವಯಸ್ಸಾಗಿತ್ತು. ದೀರ್ಘಕಾಲದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು, ರಾಯಪುರದ ಏಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ತೀಜನ ಬಾಯಿ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

<><><><>

ಬ್ರಿಕ್ಸ್ ಅಧ್ಯಕ್ಷ ಸ್ಥಾನವನ್ನು ಭಾರತ ವಹಿಸಿಕೊಂಡಿರುವ ಹಿನ್ನೆಲೆಯಲ್ಲಿ, ಎರಡು ದಿನಗಳ ಬ್ರಿಕ್ಸ್ ಮಹಿಳಾ ಕಾರ್ಯಕಾರಿ ಗುಂಪಿನ ಸಭೆ ನಾಳೆಯಿಂದ ಕೇರಳದ ಕೊಚ್ಚಿಯಲ್ಲಿ ಆರಂಭವಾಗಲಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ಪ್ರಕಾರ, ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಹಿರಿಯ ಸರ್ಕಾರಿ ಅಧಿಕಾರಿಗಳು, ಮಹಿಳಾ ಸಬಲೀಕರಣ, ಮಹಿಳೆಯರ ನೇತೃತ್ವದ ಅಭಿವೃದ್ಧಿ ಹಾಗೂ ಪರಸ್ಪರ ಸಹಕಾರಕ್ಕೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಈ ಸಭೆಯು ಇದೇ ೮ ಮತ್ತು ೯ರಂದು ನಡೆಯಲಿರುವ ಬ್ರಿಕ್ಸ್ ಮಹಿಳಾ ಸಚಿವರ ಸಭೆಗೆ ಭದ್ರ ಅಡಿಪಾಯ ಹಾಕಲಿದೆ ಎಂದು ಸಚಿವಾಲಯ ತಿಳಿಸಿದೆ.

<><><><>

ಲಂಡನ್‌ನ ಲಾರ್ಡ್ಸ್ ಕ್ರಿಕೆಟ್ ಮೈದಾನದಲ್ಲಿ ಇಂದು ನಡೆಯಲಿರುವ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಫೈನಲ್‌ನಲ್ಲಿ ಆತಿಥೇಯ ಇಂಗ್ಲೆಂಡ್ ತಂಡ, ಆಸ್ಟ್ರೇಲಿಯಾವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಟೂರ್ನಿಯಲ್ಲಿ ಇದುವರೆಗೆ ಉಭಯ ತಂಡಗಳು ಅಜೇಯವಾಗಿ ಫೈನಲ್‌ಗೆ ಪ್ರವೇಶಿಸಿವೆ.

ಆಸ್ಟ್ರೇಲಿಯಾ ತಂಡವು ಸೆಮಿಫೈನಲ್‌ನಲ್ಲಿ ವೆಸ್ಟ್ ಇಂಡೀಸ್ ತಂಡವನ್ನು ಮಣಿಸಿ ಪ್ರಶಸ್ತಿ ಸುತ್ತಿಗೆ ಲಗ್ಗೆ ಇಟ್ಟಿದ್ದರೆ, ಇಂಗ್ಲೆಂಡ್ ತಂಡ ಗುರುವಾರ ನಡೆದ ಸೆಮಿಫೈನಲ್‌ನಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಗೆದ್ದು ಸತತ ಆರನೇ ಜಯದೊಂದಿಗೆ ಫೈನಲ್‌ಗೆ ಪ್ರವೇಶಿಸಿದೆ.  ಉಭಯ ತಂಡಗಳ ನಡುವಿನ ಈ ಪ್ರಶಸ್ತಿ ಹಣಾಹಣಿಯು ರೋಚಕ ಪೈಪೋಟಿಗೆ ಸಾಕ್ಷಿಯಾಗುವ ನಿರೀಕ್ಷೆಯಿದೆ.

<><><>

ಫಿಲಡೆಲ್ಫಿಯಾದಲ್ಲಿ ನಿನ್ನೆ ನಡೆದ ಫಿಫಾ ವಿಶ್ವಕಪ್‌ನ, ೧೬ನೇ ಸುತ್ತಿನ ಪಂದ್ಯದಲ್ಲಿ ಪರಾಗ್ವೆ ವಿರುದ್ಧ ೧-೦ ಅಂತರದ ಜಯ ಸಾಧಿಸುವ ಮೂಲಕ ಫ್ರಾನ್ಸ್ ಕ್ವಾರ್ಟರ್ ಫೈನಲ್‌ಗೆ ದಾಪುಗಾಲಿಟ್ಟಿದೆ. ೭೦ನೇ ನಿಮಿಷದಲ್ಲಿ ಫ್ರಾನ್ಸ್ ನಾಯಕ ಕೈಲಿಯನ್ ಎಂಬಾಪೆ ಪೆನಾಲ್ಟಿ ಸ್ಥಾನದಿಂದ ಪಂದ್ಯದ ಏಕೈಕ ಗೋಲು ಗಳಿಸಿದರು. ಫ್ರಾನ್ಸ್ ಈಗ ಕ್ವಾರ್ಟರ್ ಫೈನಲ್‌ನಲ್ಲಿ ಮೊರಾಕೊ ತಂಡವನ್ನು ಎದುರಿಸಲಿದೆ. ಇದಕ್ಕೂ ಮುನ್ನ ಈಜಿಪ್ಟ್ ಹಾಗೂ ಆಸ್ಟ್ರೇಲಿಯಾ ತಂಡಗಳ ನಡುವಿನ ಪಂದ್ಯ ನಿಗದಿತ ಸಮಯ ಮತ್ತು ಹೆಚ್ಚುವರಿ ಸಮಯದ ಬಳಿಕ ೧-೧ ಅಂತರದಲ್ಲಿ ಡ್ರಾ ಸಾಧಿಸಿತ್ತು. ನಂತರ ಶೂಟೌಟ್‌ನಲ್ಲಿ ಆಸ್ಟ್ರೇಲಿಯಾ ವಿರುದ್ಧ ಈಜಿಪ್ಟ್ ೪-೨ ಅಂತರದಲ್ಲಿ ಗೆಲುವು ಸಾಧಿಸಿ, ಮುಂದಿನ ಹಂತಕ್ಕೆ ಪ್ರವೇಶಿಸಿತು.

<><><>

ವಿಂಬಲ್ಡನ್ ಟೆನಿಸ್ ಚಾಂಪಿಯನ್‌ಶಿಪ್‌ನಲ್ಲಿಂದು ಸರ್ಬಿಯಾದ ನೊವಾಕ್ ಜೊಕೊವಿಚ್ ೧೬ರ ಸುತ್ತಿನ ಪಂದ್ಯದಲ್ಲಿ ರೋಮನ್ ಸಫಿಯುಲಿನ್ ಅವರನ್ನು ಹಾಗೂ ಅಗ್ರ ಶ್ರೇಯಾಂಕಿತ ಇಟಲಿಯ ಜಾನಿಕ್ ಸಿನ್ನರ್ ಅವರು ಜಪಾನ್‌ನ ಶಿಂಟಾರೊ ಮೊಚಿಜುಕಿಯನ್ನು ಎದುರಿಸಲಿದ್ದಾರೆ. ಮಹಿಳೆಯರ ಸಿಂಗಲ್ಸ್‌ನ ೧೬ರ ಸುತ್ತಿನಲ್ಲಿ ಅಗ್ರ ಶ್ರೇಯಾಂಕಿತೆ ಅರಿನಾ ಸಬಲೆಂಕಾ ಜಪಾನ್‌ನ ನವೋಮಿ ಒಸಾಕಾ ವಿರುದ್ಧ ಸೆಣಸಿದ್ದಾರೆ.

<><><>

ಕೇಂದ್ರ ಶಿಕ್ಷಣ ಸಚಿವಾಲಯದ ಸಮಗ್ರ ಶಿಕ್ಷಣ ಅಭಿಯಾನದಡಿ ಆರಂಭಿಸಿದ ರಾಷ್ಟ್ರೀಯ ಯೋಜನೆ, 'ನಿಪುಣ ಭಾರತ ಮಿಷನ್' ಅನುಷ್ಠಾನಗೊಂಡು ಇಂದಿಗೆ ೫ ವರ್ಷಗಳು ಪೂರ್ಣಗೊಂಡಿವೆ. 'ನಿಪುಣ ಭಾರತ್ ಮಿ?ನ್', ಪ್ರತಿ ಮಗು, ೩ನೇ ತರಗತಿಯ ಅಂತ್ಯದ ವೇಳೆಗೆ, ಮೂಲ ಸಾಕ್ಷರತೆ ಮತ್ತು ಸಂಖ್ಯಾಶಾಸ್ತ್ರ ಸಾಧನೆಯನ್ನು ಖಚಿತಪಡಿಸುತ್ತದೆ. ೩ ರಿಂದ ೯ ವ? ವಯಸ್ಸಿನ ಮಕ್ಕಳಿಗೆ,

ಜೀವಿತಾವಧಿಯ ಕಲಿಕೆಗಾಗಿ, ಮೂಲಭೂತ ಓದು, ಬರವಣಿಗೆ ಮತ್ತು ಗಣಿತ ಕೌಶಲ್ಯಗಳನ್ನು ಪಡೆಯಲು ಈ ಯೋಜನೆ ನಿರ್ದಿ? ಕಲಿಕಾ ಗುರಿಗಳನ್ನು ನಿಗದಿಪಡಿಸುತ್ತದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>